ಓ.ಎಸ್ಃ 364-2008

ಡಿ. ಡಬ್ಲ್ಯೂ ಃ 18

**<u>ಸಾಕ್ಷಿಗೆ ದಿನಾಂಕ 06.12.2021 ರಂದು ಪ್ರಮಾಣ ವಚನ ನೀಡಲಾಯಿತು.</u>**

**<u>ಪಾಟೀಸವಾಲುಃ ವಾದಿ ಪರ ವಕೀಲರಿಂದ</u>**

ನಾನು ನಿಡಿ 85 ರ ಸ್ವತ್ತನ್ನು ಬಸವರಾಜು ಎಂಬುವವರಿಂದ ಖರೀದಿಸಿರುತ್ತೇನೆ. ಸದರಿ ಸ್ವತ್ತನ್ನು ಬಸವರಾಜು ರವರು ಮೃತ 4 ನೇ ಪ್ರತಿವಾದಿಯಿಂದ ಖರೀದಿಸಿದ್ದು ಮೂಲ ಕ್ರಯ ಪತ್ರವನ್ನು ನ್ಯಾ.ಕ್ಕೆ ಹಾಜರುಪಡಿಸಿಲ್ಲ. ಸ್ವತ್ತನ್ನು ಖರೀದಿಸುವ ಸಮಯದಲ್ಲಿ ಸ್ವತ್ತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಪರಿಶೀಲನೆ ಮಾಡಿರುತ್ತೇನೆ. 4 ನೇ ಪ್ರತಿವಾದಿಗೆ ಸದರಿ ಸ್ವತ್ತು ಪಿತ್ರಾರ್ಜಿತ ಸ್ವತ್ತಾಗಿರುತ್ತದೆ. 4 ನೇ ಪ್ರತಿವಾದಿಯು ಸ್ವತ್ತಿನ ಸಂಪೂರ್ಣ ಮಾಲೀಕರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವ ಷೆಡ್ಯೂಲ್ ಸ್ವತ್ತಿನಲ್ಲಿ ವಾದಿಗೂ ಸಹಾ ಭಾಗ ಇದೆ ಎಂದರೆ ಸರಿಯಲ್ಲ. ವಾದಿಗೆ ಮೋಸ ಮಾಡುವ ಉದ್ದೇಶದಿಂದ ಬಸವರಾಜು ರವರ ಜೊತೆ ಸೇರಿಕೊಂಡು ಸದರಿ ಸ್ವತ್ತನ್ನು ಕ್ರಯಕ್ಕೆ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಬಸವರಾಜು ರವರಿಗೆ ಸ್ವತ್ತನ್ನು ಮಾರಾಟ ಮಾಡುವ ಯಾವುದೇ ಅಧಿಕಾರವಿರಲಿಲ್ಲ ಎಂದರೆ ಸರಿಯಲ್ಲ. ವಾದಿಗೆ ಭಾಗಾಂಶ ನೀಡಬೇಕಾಗುತ್ತದೆ ಎಂಬ ದುರುದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ
ಶ್ರೀರಂಗಪಟ್ಟಣ